# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 264 (297) |
| **ಸದಸ್ಯರ ಹೆಸರು** | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸ ಬೇಕಾದ ದಿನಾಂಕ** | : | 29.01.2026 |
| **ಉತ್ತರಿಸುವ ಸಚಿವರು** | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಕರಾವಳಿ ಸುಮಾರು 320 ಕಿ.ಮೀ ಉದ್ದ ಹೊಂದಿದ್ದು, ಇಲ್ಲಿ ಹೊಸ ಬಗೆಯ ಪ್ರವಾಸಿ ಆಕರ್ಷಣೆಗಳಿಗೆ ಪೂರಕವಾದ ಭೌಗೋಳಿಕ, ಧಾರ್ಮಿಕ, ಸಾಂಸ್ಕೃತಿಕ ಹಾಗೂ ಪಾರಂಪರಿಕ ಹಿನ್ನೆಲೆಯನ್ನು ಹೊಂದಿರುವ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿಗೆ ಹೇರಳ ಅವಕಾಶಗಳಿರುವ ಕರಾವಳಿಯ ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ರೂಪಿಸಿರುವ ಯೋಜನೆಗಳೇನು; | 2025-26 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-385 ರಲ್ಲಿ "ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಕಡಲ ತೀರದ ಅಭಿವೃದ್ಧಿ ಹಾಗೂ ರಸ್ತೆಬದಿ ಸೌಲಭ್ಯಗಳನ್ನು (ಹೈವೇ ಹಬ್ಸ್) ಉನ್ನತೀಕರಿಸುವ ಮೂಲಕ ಶೈಕ್ಷಣಿಕ, ಆರೋಗ್ಯ, ಸಾಹಸ ಜಲಸಾರಿಗೆ ಹಾಗೂ ಕಡಲ ತೀರದ ಪ್ರವಾಸೋದ್ಯಮಗಳಿಗೆ ಲಭ್ಯವಿರುವ ಅವಕಾಶಗಳನ್ನು ಉಪಯೋಗಿಸಿ ಕೊಳ್ಳಲಾಗುವುದು" ಎಂದು ಘೋಷಿಸಲಾಗಿದ್ದು, ಸದರಿ ವಿಷಯಕ್ಕೆ ಸಂಬಂಧಿಸಿದಂತೆ ವೃತ್ತಿಪರ ಸಲಹಾ ಸಂಸ್ಥೆಯನ್ನು ಆಯ್ಕೆ ಮಾಡಲು ಕರೆದ ಟೆಂಡರ್‌ನಲ್ಲಿ ಬಿಡ್ಡುದಾರರಾದ M/s IPE Global Limited ಸಂಸ್ಥೆಯವರಿಗೆ ಕಾರ್ಯಾದೇಶ ನೀಡಲಾಗಿರುತ್ತದೆ ಹಾಗೂ ಪಿಪಿಪಿ ಮಾದರಿಯಲ್ಲಿ ಉಡುಪಿಯಲ್ಲಿ 3 ಯೋಜನೆಗಳನ್ನು ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 2 ಯೋಜನೆಗಳನ್ನು ಕೈಗೊಳ್ಳಲು Concept Note ಗೆ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯಿಂದ ಅನುಮೋದನೆ ಪಡೆಯಲಾಗಿರುತ್ತದೆ. ವಹಿವಾಟು ಸಲಹೆಗಾರರನ್ನು (Transaction Advisor) ಆಯ್ಕೆಮಾಡಿಕೊಳ್ಳಲು ಎರಡು ಬಾರಿ ಟೆಂಡರ್ ಕರೆಯಲಾಗಿದ್ದು, ಬಿಡ್ಡುದಾರರು ತಾಂತ್ರಿಕವಾಗಿ ಅನರ್ಹರಾಗಿರುವುದರಿಂದ, ಮರು ಟೆಂಡರ್ ಕರೆಯಲಾಗಿ 5 ಜನ ಬಿಡ್ಡುದಾರರು ಭಾಗವಹಿಸಿದ್ದು, ಸದರಿ ಬಿಡ್ಡುದಾರರ ತಾಂತ್ರಿಕ ಅರ್ಹತೆಯ ದಾಖಲೆಗಳನ್ನು ಪರಿಶೀಲಿಸಲಾಗುತ್ತಿದೆ.<br><br>ಉತ್ತರ ಕನ್ನಡ ಜಿಲ್ಲೆಯಲ್ಲಿರುವ ನಾಲ್ಕು ನಿವೇಶನಗಳಲ್ಲಿ ಪಿಪಿಪಿ ಮಾದರಿಯಲ್ಲಿ |
| ಆ) | ಧಾರ್ಮಿಕ, ಜೈವಿಕ ಪರಿಸರ ಮತ್ತು ಬೀಚ್‌ಗಳ ಅಭಿವೃದ್ಧಿಗೆ ಪೂರಕವಾಗಿ ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿ ಪಡಿಸಬೇಕಾಗಿದ್ದು, ಈ ಕುರಿತು ಸರ್ಕಾರ ರೂಪಿಸಿರುವ ಯೋಜನೆಗಳೇನು; | |

| | | |
|---|---|---|
| | | ಅಭಿವೃದ್ಧಿ ಯೋಜನೆಗಳನ್ನು ಕೈಗೊಳ್ಳಲು Concept Note ಗಳನ್ನು ತಯಾರಿಸಲು ಕ್ರಮವಹಿಸಲಾಗುತ್ತಿದೆ. ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯಿಂದ concept note ಅನುಮೋದನೆ ನಂತರ ವಹಿವಾಟು ಸಲಹೆಗಾರರನ್ನು ಟೆಂಡರ್ ಮೂಲಕ ಆಯ್ಕೆ ಮಾಡಲು ಕ್ರಮ ವಹಿಸಲಾಗುವುದು.<br><br>ಮುಂದುವರೆದು ದಿನಾಂಕ:10.01.2026 ರಂದು ಕರಾವಳಿ ಜಿಲ್ಲೆಗಳ ಅಭಿವೃದ್ಧಿ ದೃಷ್ಟಿಕೋನದಿಂದಲೇ ಕರಾವಳಿ ಕರ್ನಾಟಕ ಸಮ್ಮೇಳನ ನಡೆಸಲಾಗಿದ್ದು, ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಈ ಮೂರು ಕರಾವಳಿ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಸಮಗ್ರ ದೃಷ್ಟಿಕೋನವನ್ನು ರೂಪಿಸುವುದು ಕರಾವಳಿ ಕರ್ನಾಟಕ ಪ್ರವಾಸೋದ್ಯಮ ಸಮಾವೇಶದ ಪ್ರಾಥಮಿಕ ಉದ್ದೇಶವಾಗಿತ್ತು, ಹೂಡಿಕೆಯನ್ನು ಆಕರ್ಷಿಸಲು, ಉದ್ಯಮಶೀಲತೆಯನ್ನು ಉತ್ತೇಜಿಸಲು, ಉದ್ಯೋಗವನ್ನು ಸೃಷ್ಟಿಸಲು ಮತ್ತು ಪ್ರದೇಶದ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು ನೈಸರ್ಗಿಕ, ಸಾಂಸ್ಕೃತಿಕ, ಕಡಲ ಮತ್ತು ಪರಿಸರ ಸ್ವತ್ತುಗಳನ್ನು ಬಳಸಿಕೊಳ್ಳುವತ್ತ ಒತ್ತು ನೀಡುವುದು ಇದರ ಪ್ರಮುಖ ಉದ್ದೇಶವಾಗಿತ್ತು. ಅನುಮೋದನೆಗಳಲ್ಲಿ ಕಾರ್ಯವಿಧಾನದ ವಿಳಂಬಗಳು ಮತ್ತು ಪ್ರದೇಶ-ನಿರ್ದಿಷ್ಟ ಪ್ರವಾಸೋದ್ಯಮ ನೀತಿಯ ಅಗತ್ಯ ಸೇರಿದಂತೆ ನೀತಿ ಮತ್ತು ನಿಯಂತ್ರಕ ನಿರ್ಬಂಧಗಳನ್ನು ಗುರುತಿಸುವುದು ಮತ್ತು ಚುನಾಯಿತ ಪ್ರತಿನಿಧಿಗಳು, ಉದ್ಯಮ ತಜ್ಞರು, ಹೂಡಿಕೆದಾರರು ಮತ್ತು ಆಡಳಿತಾತ್ಮಕ ನಾಯಕತ್ವದಿಂದ ಕಾರ್ಯಸಾಧ್ಯವಾದ ಸಲಹೆಗಳನ್ನು ಪಡೆಯುವುದು ಪ್ರಮುಖ ಉದ್ದೇಶವಾಗಿತ್ತು. ಕರಾವಳಿ ಕರ್ನಾಟಕದಲ್ಲಿ ಪ್ರವಾಸೋದ್ಯಮ ಕ್ಷೇತ್ರದ ಸುಸ್ಥಿರ ಮತ್ತು ಸಮಗ್ರ ಬೆಳವಣಿಗೆಯನ್ನು ಖಚಿತಪಡಿಸಿಕೊಳ್ಳಲು ಪರಿಸರ ಪ್ರವಾಸೋದ್ಯಮ, ಬೀಚ್ ಮತ್ತು ಜಲ ಕ್ರೀಡಾ ಮೂಲಸೌಕರ್ಯ, ಪರಂಪರೆ ಪ್ರವಾಸೋದ್ಯಮ, ಸಮುದಾಯ ತೊಡಗಿಸಿಕೊಳ್ಳುವಿಕೆ ಮತ್ತು ಕೈಗಾರಿಕಾ ಸೌಲಭ್ಯ ಕಾರ್ಯವಿಧಾನಗಳಂತಹ ಆದ್ಯತೆಯ ಕ್ಷೇತ್ರಗಳ ಅಭಿವೃದ್ಧಿ ಕುರಿತು |

| | | |
|---|---|---|
| | | ಚರ್ಚಿಸಲಾಯಿತು.<br><br>ಮುಂದುವರೆದು, ಕರಾವಳಿ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಇಲಾಖೆಯ ನಿವೇಶನದ ವಿವರವನ್ನು (ಲ್ಯಾಂಡ್ ಬ್ಯಾಂಕ್) **ಅನುಬಂಧ-1** ರಲ್ಲಿ ಒದಗಿಸಿದೆ. ಸದರಿ ಸ್ಥಳಗಳಲ್ಲಿ ಪಿಪಿಪಿ ಮಾದರಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮವಹಿಸಲಾಗುವುದು<br><br>ಕರಾವಳಿ ಜಿಲ್ಲೆಗಳನ್ನೊಳಗೊಂಡಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಕರ್ನಾಟಕ ಪ್ರವಾಸೋದ್ಯಮ ನೀತಿ 2024-29 ಅನ್ನು ಜಾರಿಗೆ ತರಲಾಗಿರುತ್ತದೆ. ಈ ನೀತಿಯಡಿ ಗುರುತಿಸಲಾಗಿರುವ 25 ಪ್ರವಾಸಿ ಉತ್ಪನ್ನಗಳನ್ನು ಅಭಿವೃದ್ಧಿಪಡಿಸಲು ಮುಂದೆ ಬರುವ ಖಾಸಗಿ ಬಂಡವಾಳ ಹೂಡಿಕೆದಾರರನ್ನು ಸೆಳೆಯಲು ಸಹಾಯಧನ, ಪ್ರೋತ್ಸಾಹಕಗಳು ಮತ್ತು ರಿಯಾಯಿತಿಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಪ್ರವಾಸೋದ್ಯಮ/ಆತಿಥ್ಯ ಕ್ಷೇತ್ರದಲ್ಲಿ ಸಣ್ಣ ಉದ್ದಿಮೆದಾರರನ್ನು ಉತ್ತೇಜಿಸಲು ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿ ನೀಡುವ ಕಾರ್ಯಕ್ರಮ ಮತ್ತು ಮೊಬೈಲ್ ಕ್ಯಾಂಟೀನ್ ಖರೀದಿಸಲು ಸಹಾಯಧನ ಕಾರ್ಯಕ್ರಮ ಯೋಜನೆಗಳನ್ನು ಕೈಗೊಳ್ಳಲಾಗುತ್ತಿದೆ |
| ಇ) | ಕರಾವಳಿಯಲ್ಲಿ ಸುಮಾರು 22 ಬೀಚ್ ಹಾಗೂ 30ಕ್ಕೂ ಹೆಚ್ಚು ಪ್ರಮುಖ ಧಾರ್ಮಿಕ ಕೇಂದ್ರಗಳಿಗೆ ಹಾಗೂ ಪ್ರವಾಸೋದ್ಯಮಕ್ಕೆ ವಿಫುಲ ಅವಕಾಶಗಳಿರುವುದರಿಂದ ಪರಿಸರಕ್ಕೆ ಪೂರಕವಾದ ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕಾಗಿದ್ದು, ಕರಾವಳಿಗೆ ಪ್ರತ್ಯೇಕ ಪ್ರವಾಸೋದ್ಯಮ ನೀತಿ ರೂಪಿಸಿ, ಅಭಿವೃದ್ಧಿಪಡಿಸಲು ಸರ್ಕಾರ ಕೂಡಲೇ ಅಗತ್ಯ ಕ್ರಮ ವಹಿಸುವುದೇನು? | ಕರಾವಳಿ ಜಿಲ್ಲೆಗಳನ್ನೊಳಗೊಂಡಂತೆ, ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಕರ್ನಾಟಕ ಪ್ರವಾಸೋದ್ಯಮ ನೀತಿ 2024-29ನ್ನು ಈಗಾಗಲೇ ರೂಪಿಸಲಾಗಿರುತ್ತದೆ. |

**ಸಂಖ್ಯೆ:ಟಿಓಆರ್ 34 ಟಿಡಿವಿ 2026**

**(ಎಚ್.ಕೆ.ಪಾಟೀಲ್)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು

ಅನುಬಂಧ - 1

## Details of DoT Land Banks in Coastal Karnataka

| Sl No. | District | Name of the Land parcel | Survey Number(s) | Extent of Land *(in decimal acres)* | Existing / Completed / Ongoing Projects | Proposed Projects | Remarks on CRZ |
|---|---|---|---|---|---|---|---|
| 1 | Dakshina Kannada | Thannirbhavi Beach | 52 (4.10 acres)<br>1 (1.10 acres) | 5.50 | - | Coastal Tourism Development - Resort | Not classified under Beach Tourism Area in CZMP |
| 2 | Udupi | Trasi Beach | 9/2B | 6.13 | - | Coastal Tourism Development - Multi-Product Tourism Zone on PPP mode | Not classified under Beach Tourism Area in CZMP. However the land parcel is present on the landward side, CRZ clearance may be obtained. |
| 3 | Udupi | Trasi Beach | 27/3C1, | 3.20 | | Coastal Tourism Development - Multi-Product Tourism Zone on PPP mode | Partial area of the land parcel is classified under Beach Tourism Area in CZMP. However the land parcel is present on the landward side, CRZ clearance may be obtained. |
| 4 | Udupi | Trasi Beach | 27/3B, 27/1A1P2 | 5.58 | Development of Tourist Amenities by DoT | - | Classified under Beach Tourism Area in CZMP. Dept is undertaking development of Tourist Amenities. |
| 5 | Uttara Kannada | Chittakula, Sadasivgad, Karwar | 6 | 10.00 | - | - | CRZ is not applicable |
| 6 | Uttara Kannada | Banavasi | 197 | 7.75 | - | - | CRZ is not applicable |
| 7 | Uttara Kannada | Gokarna | 1567 | 1.95 | - | - | CRZ is not applicable |
| 8 | Uttara Kannada | Anmod | 53A2, 53A1A/7, 53A1A/8 | 1.05 | - | - | CRZ is not applicable |